# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 02 ಇಎಸ್‌ಟಿ [9] 2017 /3267

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:13-03-2018.

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 33 ಹೈಕಉ 2014 ಬೆಂಗಳೂರು ದಿನಾಂಕ:26.02.2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟರಿಕ್ ಸಂಸ್ಥೆ ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇಎಸ್‌ಟಿ 4(ಎ), ಮತ್ತು 4(ಬಿ)ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇಎಸ್‌ಟಿ (1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

20439

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 33 ಹೈಕಲು 2014

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 26.02.2018

## ಸುತ್ತೋಲೆ

ವಿಷಯ: ಸ್ಥಳೀಯ ವೃಂದ ರಚಿಸುವ ಮುನ್ನ ಮಾತೃ ವೃಂದದಲ್ಲಿ ಲಭ್ಯವಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳಿಗೆ ಹಂಚಿಕೆ ಮಾಡುವುದಕ್ಕೆ ಸಂಬಂಧಿಸಿದಂತೆ.

******

ಅನುಚ್ಛೇದ 371ಜೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಮಾತೃ ವೃಂದದಿಂದ ಸ್ಥಳೀಯ ವೃಂದವನ್ನು ಬೇರ್ಪಡಿಸಿ, ಕಾರ್ಯನಿರ್ವಹಿಸುತ್ತಿರುವ ನೌಕರರಲ್ಲಿ ಸ್ಥಳೀಯ ವ್ಯಕ್ತಿಗಳಿಂದ ಆಯ್ಕೆ ಪಡೆದು, ಆಯ್ಕೆಗನುಸಾರ ಹಂಚಿಕೆ ಮಾಡಿದ ತರುವಾಯ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳು ನೇಮಕಾತಿ, ಮುಂಬಡ್ತಿ, ಜೇಷ್ಠತೆ ಹಾಗೂ ರೋಸ್ಟರ್ ಬಿಂದುಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಘಟಕಗಳೆಂದು ಪರಿಗಣಿಸಬೇಕಾಗುವ ಹಿನ್ನೆಲೆಯಲ್ಲಿ, ಮಾತೃ ವೃಂದದಿಂದ ಸ್ಥಳೀಯ ವೃಂದ ಬೇರ್ಪಡಿಸುವ ಮುನ್ನ ಲಭ್ಯವಿರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಮಾತೃ ವೃಂದದಿಂದ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳನ್ನು ಬೇರ್ಪಡಿಸಿದಾಗ ಅನುಷ್ಠಾನಾಧಿಕಾರಿಗಳು ಈ ಕೆಳಕಂಡ ವಿಧಿ ವಿಧಾನಗಳನ್ನು ಪಾಲಿಸುವಂತೆ ಸೂಚಿಸಲಾಗಿದೆ:

1. ಮಾತೃ ವೃಂದದಿಂದ ಸ್ಥಳೀಯ ವೃಂದವನ್ನು ಬೇರ್ಪಡಿಸಿದ ತರುವಾಯ ಮಾತೃ ವೃಂದದಲ್ಲಿ ಬೇರ್ಪಡಿಸುವ ಮುನ್ನ ಮುಂದುವರೆಸಿಕೊಂಡು ಬಂದಂತಹ ಬ್ಯಾಕ್‌ಲಾಗ್ ಹುದ್ದೆಗಳನ್ನು ಪ್ರಮಾಣಬದ್ಧ (proratc) ಆಧಾರದ ಮೇಲೆ ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ವೃಂದಗಳಿಗೆ ಹಂಚಿಕೆ ಮಾಡುವುದು.
2. ಹೀಗೆ ಪ್ರಮಾಣಬದ್ಧ ಆಧಾರದ ಮೇಲೆ ಸ್ಥಳೀಯ ವೃಂದಕ್ಕೆ ಹಂಚಿಕೆ ಮಾಡುವಾಗ ಪ್ರಮಾಣಬದ್ಧ ಹುದ್ದೆಗಳನ್ನು, ಸ್ಥಳೀಯ ವೃಂದ ರಚಿಸಿ, ಕಾರ್ಯನಿರ್ವಹಿಸುತ್ತಿರುವ ನೌಕರರಲ್ಲಿ ಸ್ಥಳೀಯರಿಂದ ಆಯ್ಕೆ ಪಡೆದು, ಆಯ್ಕೆಗನುಸಾರ ಹಂಚಿಕೆ ಮಾಡಿದ ತರುವಾಯ ಎರಡೂ ವೃಂದಗಳಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳನ್ನು ಮೊದಲಿಗೆ

.........2

5.2551
5/3/18

ತತ್ಸಂಬಂಧ ವೃಂದಗಳಿಗೆ ಪ್ರಮಾಣಬದ್ಧವಾಗಿ ಹಂಚಿಕೆಯಾದ ಬ್ಯಾಕ್‌ಲಾಗ್ ಹುದ್ದೆಗಳಿಗೆದುರಾಗಿ ಅರ್ಹ ಅಭ್ಯರ್ಥಿಗಳಿಂದ ತುಂಬುವುದು. ಹೀಗೆ ಬ್ಯಾಕ್‌ಲಾಗ್ ಹುದ್ದೆಗಳನ್ನು ತುಂಬಿದ ತರುವಾಯ ಇನ್ನೂ ಖಾಲಿ ಹುದ್ದೆಗಳು ಲಭ್ಯವಿದ್ದಲ್ಲಿ, ಮೊದಲಿಗೆ ಕಾಣೆಯಾದ ರೋಸ್ಟರ್ ಬಿಂದುಗಳಂತೆ ಅರ್ಹವಿರುವ ಅಭ್ಯರ್ಥಿಗಳಿಂದ ತುಂಬಿ, ರೋಸ್ಟರ್ ಮುಂದುವರೆಸಿಕೊಂಡು ಹೋಗುವಲ್ಲಿ ದಿನಾಂಕ 10.04.2014ರಂದು ಹೊರಡಿಸಲಾದ ಅಧಿಕೃತ ಜ್ಞಾಪನದಲ್ಲಿ ಸೂಚಿಸಿರುವಂತೆ ಕ್ರಮ ವಹಿಸುವುದು.

[signature] 26.02.2018

[signature] 26.02.2018

(ಕೆ.ಎಲ್. ಲೋಕನಾಥ)
ಸರ್ಕಾರದ ಜಂಟಿ ಕಾರ್ಯದರ್ಶಿ
(ಹೈದ್ರಾಬಾದ್-ಕರ್ನಾಟಕ ವಿಶೇಷ ಕೋಶ)
ಸಿಆಸುಇ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ ಸದರಿ ಸುತ್ತೋಲೆಯನ್ನು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಮತ್ತು ಅದರ 500 ಪ್ರತಿಗಳನ್ನು ಪೂರೈಸುವುದಕ್ಕಾಗಿ ಪ್ರತಿಯನ್ನು ಕಳುಹಿಸಲಾಗಿದೆ.

**ಪ್ರತಿ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2. ಎಲ್ಲಾ ಇಲಾಖಾ ಮುಖ್ಯಸ್ಥರು.
3. ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ.
4. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
5. ಆಡಳಿತಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಪೋಲೀಸ್ ಹೌಸಿಂಗ್ ಕಾರ್ಪೊರೇಷನ್.
7. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ.
8. ಕುಲಸಚಿವರು, ಬೆಂಗಳೂರು ಕೃಷಿ ವಿಶ್ವವಿದ್ಯಾಲಯ.
9. ಶಿಕ್ಷಣ ಇಲಾಖೆಯ ಹೆಚ್ಚುವರಿ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ.
10. ಜಿಲ್ಲಾಧಿಕಾರಿಗಳು, ಕಲಬುರಗಿ/ರಾಯಚೂರು/ಕೊಪ್ಪಳ/ಯಾದಗಿರಿ/ಬಳ್ಳಾರಿ/ಬೀದರ್ ಜಿಲ್ಲೆ.
11. ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳು, ಕಲಬುರಗಿ/ರಾಯಚೂರು/ಕೊಪ್ಪಳ/ಯಾದಗಿರಿ/ಬಳ್ಳಾರಿ/ಬೀದರ್ ಜಿಲ್ಲೆ.
12. ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು, ಕಲಬುರಗಿ/ರಾಯಚೂರು/ಕೊಪ್ಪಳ/ಯಾದಗಿರಿ/ಬಳ್ಳಾರಿ/ ಬೀದರ್ ಜಿಲ್ಲೆ.
13. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಎಲ್ಲಾ ಸಹಾಯಕ ಆಯುಕ್ತರು.
14. ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.